ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ನೀರು ಸರಬರಾಜು ಮತ್ತು ಒಳಚರಂಡಿ ಯೋಜನೆಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

91 (1097) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ನಗರ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿ ಯೋಜನೆಗಳು ಯಾವುವು;

(ಆ) 2019-20 ಮತ್ತು 2020-21ರಲ್ಲಿ ಯೋಜನೆಗಳಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು;

(ಇ) ಟೆಂಡರ್ ಅವಧಿ ಪೂರ್ಣಗೊಂಡಿದ್ದರು ಕಾಮಗಾರಿ ಮುಗಿಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಗುತ್ತಿಗೆದಾರರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಉ) ನಗರ ಪ್ರದೇಶಗಳಲ್ಲಿ ನೂತನವಾಗಿ ನಿವೇಶನಗಳನ್ನು ನೀಡುವ ಯೋಜನೆಗಳು ಸರ್ಕಾರದ ಮುಂದಿವೆಯೇ;

(ಊ) ಹಾಗಿದ್ದಲ್ಲಿ, ಯಾವ ಯಾವ ನಗರಗಳಲ್ಲಿ ಭೂಸ್ವಾಧೀನ ಪ್ರಾರಂಭವಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)